# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಎಂ. ನಾರಾಯಣಸ್ವಾಮಿ**
**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 248**
**ಉತ್ತರಿಸಬೇಕಾದ ದಿನಾಂಕ : 14.12.2021**
**ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಇಲಾಖೆಯಿಂದ ರೈತರಿಗೆ ಸಾಲ ನೀಡುವಾಗ ಅನುಸರಿಸುವ ಅರ್ಹತೆ ಹಾಗೂ ಮಾನದಂಡಗಳೇನು? | ಸಹಕಾರ ಇಲಾಖೆಯಿಂದ ರೈತರಿಗೆ ಸಾಲ ನೀಡುವಾಗ ಅನುಸರಿಸುವ ಅರ್ಹತೆ ಹಾಗೂ ಮಾನದಂಡಗಳು:<br><br>1) **ರೂ. 3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ:**<br><br>• ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು.<br><br>• ರೈತರು ಪಹಣಿ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು.<br><br>• ರೈತನು ವಾಸವಿರುವ ಸಂಘ ಅಥವಾ ಭೂಮಿ ಹೊಂದಿರುವ ಸಂಘ ಯಾವುದಾದರೂ ಒಂದು ಸಂಘದ ವ್ಯಾಪ್ತಿಯಲ್ಲಿ ಮಾತ್ರ ಸಾಲ ಪಡೆಯತಕ್ಕದ್ದು.<br><br>• ಸದರಿ ಆರ್‌ಟಿಸಿ ಮೇಲೆ ಇತರೇ ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆದಿರಬಾರದು.<br><br>• ಈ ಯೋಜನೆಯು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳ ಸಾಲಕ್ಕಾಗಿ ಗರಿಷ್ಠ ರೂ.2.00 ಲಕ್ಷಗಳಿಗೆ ಹಾಗೂ ಬೆಳೆ ಸಾಲ, ಪಶುಸಂಗೋಪನೆ ಮತ್ತು ಮೀನುಗಾರಿಕೆ ದುಡಿಯುವ ಬಂಡವಾಳದ ಸಾಲ ಒಟ್ಟುಗೂಡಿಸಿ ರೂ.3.00ಲಕ್ಷಗಳಿಗೆ ಮಾತ್ರ ಅನ್ವಯವಾಗುತ್ತದೆ.<br><br>• ಬಡ್ಡಿ ಸಹಾಯಧನ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿ ನಿಗದಿಪಡಿಸಿದ ಸ್ಕೇಲ್ ಆಫ್ ಫೈನಾನ್ಸ್ ಗೆ ಮಾತ್ರ ಲಭಿಸುತ್ತದೆ.<br><br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು. |

| | | |
|---|---|---|
| | | 2) **<u>10.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇಕಡ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ:</u>**<br><br>• ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು.<br><br>• ಭೂಮಿ ದಾಖಲೆಗಳು, ಭದ್ರತೆಗೆ ಬೇಕಾದ ದಾಖಲೆಗಳು ಮತ್ತು ಯೋಜನಾ ವರದಿಯೊಂದಿಗೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು.<br><br>• ರೈತನು ವಾಸವಿರುವ ಸಂಘ ಅಥವಾ ಭೂಮಿ ಹೊಂದಿರುವ ಸಂಘ ಯಾವುದಾದರೂ ಒಂದು ಸಂಘದ ವ್ಯಾಪ್ತಿಯಲ್ಲಿ ಮಾತ್ರ ಸಾಲ ಪಡೆಯತಕ್ಕದ್ದು.<br><br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿಯನ್ನು ಪಾವತಿಸಬೇಕು.<br><br>• ನಬಾರ್ಡ್ ಗುರುತಿಸಿದ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳ ಪೈಕಿ ಲಘು ನೀರಾವರಿ, ಭೂ ಅಭಿವೃದ್ಧಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಜೇನು ಸಾಕಾಣಿಕೆ ಉದ್ದೇಶಗಳಿಗೆ ರೈತರಿಗೆ ನೀಡಲಾಗುವ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. ಈ ಯೋಜನೆಯು ಕೊಯ್ಲು ವರೆಗಿನ ಮತ್ತು ಕೊಯ್ಲು ನಂತರದ ಕೃಷಿ ಚಟುವಟಿಕೆಗಳಿಗೆ ಅಂದರೆ ಮಾರುಕಟ್ಟೆಗೆ ಕೃಷಿ ಉತ್ಪನ್ನ ಸಿದ್ದವಾಗುವ ಹಂತದ ವರೆಗೆ (threshing, winnowing, cleaning, grading, drying) ಅವಶ್ಯವಿರುವ ಕೃಷಿ ಯಂತ್ರೋಪಕರಣ/ಘಟಕಗಳನ್ನು ಹೊಂದಲು ನೀಡುವ ಸಾಲಗಳಿಗೂ ಸಹ ಅನ್ವಯವಾಗುತ್ತದೆ.<br><br>ದ್ವಿಚಕ್ರ ವಾಹನ, ಜೀಪು, ಪಿಕಪ್ ವ್ಯಾನ್ ಹಾಗೂ ಇನ್ನು ಮುಂತಾದ ಯಾವುದೇ ಕೃಷಿ ಸಾಗಾಣಿಕೆಗೆ ಬಳಸುವ ವಾಹನ ಸಾಲಗಳಿಗೆ, ತೋಟದ ಮನೆ, ಗ್ರಾಮೀಣ ಗೋದಾಮುಗಳಿಗೆ, ದ್ವಿತೀಯ ಸಂಸ್ಕರಣೆ, ಕೃಷಿ ಉತ್ಪನ್ನಗಳ ಮೌಲ್ಯ ವರ್ಧನೆ/ಆಹಾರ ಸಂಸ್ಕರಣೆ, ಕೃಷಿ ಕ್ಲಿನಿಕ್‌ಗೆ ನೀಡುವ ಸಾಲಗಳಿಗೆ ಈ ಯೋಜನೆ ಅನ್ವಯವಾಗುವುದಿಲ್ಲ. |
| ಆ) | ಸಹಕಾರ ಬ್ಯಾಂಕ್‌ಗಳಿಂದ ಕೃಷಿಯೇತರ ಉದ್ದೇಶಕ್ಕಾಗಿಯೂ ಸಾಲ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು: | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಬ್ಯಾಂಕಿಂಗ್ ವ್ಯವಹಾರ ನಡೆಸಲು ಪರವಾನಗಿ ಪಡೆದಿದ್ದು, ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ನಬಾರ್ಡ್ ನಿಯಮಾವಳಿಗಳನ್ವಯ ಕೃಷಿಯೇತರ ಉದ್ದೇಶಗಳಿಗೆ ಸಾಲ ನೀಡಲು ಅವಕಾಶ ಇರುತ್ತದೆ.<br><br>ಕರ್ನಾಟಕ ರಾಜ್ಯ ಕೃಷಿ ಮತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಬ್ಯಾಂಕಿಂಗ್ ವ್ಯವಹಾರ ನಡೆಸಲು ಪರವಾನಗಿ ಪಡೆಯದಿದ್ದರೂ ಸಹ ತಮ್ಮ ಬೈಲಾದನ್ವಯ ಕೃಷಿಯೇತರ ಸಾಲ ನೀಡಲು ಅವಕಾಶ ಮಾಡಿಕೊಂಡಿರುತ್ತದೆ.<br>ಸಹಕಾರ ಬ್ಯಾಂಕುಗಳು, ಕೃಷಿಯೇತರ ಸಾಲ ನೀಡಲು ನಿಯಮಗಳನ್ವಯ ಅವಕಾಶವಿರುವುದರಿಂದ ಸರ್ಕಾರದಿಂದ ತಡೆಯುವ ಪ್ರಶ್ನೆ ಉದ್ಭವಿಸುವುದಿಲ್ಲ. |

| ಇ) | ಕಳೆದ 2 ವರ್ಷಗಳಿಂದ ಸಹಕಾರ ಬ್ಯಾಂಕ್‌ಗಳಲ್ಲಿ ಅವ್ಯವಹಾರ ನಡೆಸಿರುವ ಸಂಖ್ಯೆ ಎಷ್ಟು ಹಾಗೂ ಆ ಪ್ರಕರಣಗಳು ಯಾವ ಹಂತದಲ್ಲಿದೆ; | ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳಲ್ಲಿ ಕಳೆದ ಎರಡು ವರ್ಷಗಳಿಂದ ಅವ್ಯವಹಾರ ನಡೆದಿರುವ ಬಗ್ಗೆ ದಾಖಲಾದ ವಿವರವನ್ನು ಈ ಕೆಳಗೆ ನೀಡಲಾಗಿದೆ. |
|---|---|---|

(ರೂ.ಲಕ್ಷಗಳಲ್ಲಿ)

| ಬ್ಯಾಂಕಿನ ಹೆಸರು | ಅವ್ಯವಹಾರ ನಡೆದ ಸಂಖ್ಯೆ | ಭಾಗಿಯಾದ ಸಿಬ್ಬಂದಿ ಸಂಖ್ಯೆ | ಅವ್ಯವಹಾರದ ಮೊತ್ತ | ವಸೂಲಾದ ಮೊತ್ತ | ಸಿವಿಲ್/ಕ್ರಿಮಿನಲ್ ಕ್ರಮ ಜರುಗಿಸಿರುವ ಸಂಖ್ಯೆ |
|---|---|---|---|---|---|
| ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ | 1 | 2 | 35.00 | 35.00 | 2 ಜನ ಸಿಬ್ಬಂದಿಗಳನ್ನು ದಿ.3-9-2020 ರಂದು ಅಮಾನತ್ತುಗೊಳಿಸಿ ಆಂತರಿಕ ವಿಚಾರಣೆಯನ್ನು ಪ್ರಾರಂಭಿಸಲಾಗಿದೆ. ಒಬ್ಬ ಸಿಬ್ಬಂದಿಯನ್ನು ದಿ:30.06.2021 ಮತ್ತು ಮತ್ತೊಬ್ಬ ಸಿಬ್ಬಂದಿಯನ್ನು ದಿ.23-6-2021 ರಂದು ಪುನರ್ ಸ್ಥಾಪಿಸಲಾಗಿದೆ. ಆಳಂದ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ಸಂಪರ್ಕಿಸಲಾಗಿ ಹೆಚ್ಚಿನ ದಾಖಲೆಗಳನ್ನು ಸಲ್ಲಿಸಲು ತಿಳಿಸಲಾಗಿದೆ. |
| ಮೈಸೂರು ಮತ್ತು ಚಾಮರಾಜ ನಗರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ | 2 | 9 | 220.13 | 0.00 | ಹುಣಸೂರು ಪೋಲೀಸ್ ಠಾಣೆಯಲ್ಲಿ ದಿ. 17-09-2018 ರಂದು 3 ಸಿಬ್ಬಂದಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ಸಂಖ್ಯೆ:CR.377/2018 ದಾಖಲಾಗಿದ್ದು ದೋಷಾರೋಪಣಪಟ್ಟಿ ಸಲ್ಲಿಸಲಾಗಿದೆ.<br><br>ಬೆಳಿಕೆರೆ ಪೋಲೀಸ್ ಠಾಣೆಯಲ್ಲಿ ದಿ. 17-09-2018 ರಂದು ಒಬ್ಬ ಸಿಬ್ಬಂದಿ ವಿರುಧ್ಧ ಕ್ರಿಮಿನಲ್ ಪ್ರಕರಣ ಸಂಖ್ಯೆ CR.343/2018 ದಾಖಲಾಗಿದ್ದು, ತನಿಖೆ ಪ್ರಗತಿಯಲ್ಲಿರುತ್ತದೆ. |